# ಸಾರಿಗೆ ಇಲಾಖೆಯಲ್ಲಿ 13 ಸಾವಿರ ಹುದ್ದೆ ಶೀಘ್ರ ಭರ್ತಿ

**ದಾವಣಗೆರೆ:** ಸಾರಿಗೆ ಇಲಾಖೆಯಲ್ಲಿ ಕಳೆದ ಏಳು ವರ್ಷಗಳಲ್ಲಿ ಒಂದೇ ಒಂದು ಹುದ್ದೆ ಭರ್ತಿ ಮಾಡಿಲ್ಲ. ಈಗ 13 ಸಾವಿರ ಹುದ್ದೆ ಭರ್ತಿ ಮಾಡಿಕೊಳ್ಳಲು ಮಂಡಳಿಯಲ್ಲಿ ತೀರ್ಮಾನ ಮಾಡಿ ರಾಜ್ಯ ಸರಕಾರಕ್ಕೆ ಪ್ರಸ್ತಾವನೆ ಕಳುಹಿಸಿದ್ದೇವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.



ಸ್ಮಾರ್ಟ್ ಸಿಟಿ ಯೋಜನೆಯಡಿ ದಾವಣಗೆರೆಯಲ್ಲಿ ನಿರ್ಮಾಣವಾಗುತ್ತಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಕಾಮಗಾರಿ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

2016ರಲ್ಲಿ ನಾನು ಸಚಿವನಾಗಿದ್ದಾಗ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗಿತ್ತು. ಅಲ್ಲಿಂದ ಈವರೆಗೆ 16 ಸಾವಿರ ನೌಕರರು ವಯೋ ನಿವೃತ್ತಿ ಹೊಂದಿದ್ದಾರೆ. ಆದರೆ, ಕಳೆದ ಏಳು ವರ್ಷದಲ್ಲಿ ಒಂದೇ ಒಂದು ಹುದ್ದೆ ಭರ್ತಿ ಮಾಡಿಲ್ಲ. ಈಗ 13 ಸಾವಿರ ಹುದ್ದೆ ಭರ್ತಿ ಮಾಡಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ ಎಂದರು.

## ಐದು ಸಾವಿರ ಬಸ್ ಖರೀದಿ

ಸದ್ಯದಲ್ಲಿಯೇ ಐದು ಸಾವಿರ ಹೊಸ ಬಸ್‌ಗಳನ್ನು ಖರೀದಿಸಲಾಗುವುದು. ಶಕ್ತಿ ಯೋಜನೆಯಡಿ ಈವರೆಗೂ 43 ಕೋಟಿ ಮಹಿಳೆಯರು ಪ್ರಯಾಣ ಮಾಡಿದ್ದಾರೆ. ಒಂದು ಸಾವಿರ ಕೋಟಿ ಮೊತ್ತದ ಶೂನ್ಯ ಟಿಕೆಟ್ ವಿತರಿಸಲಾಗಿದೆ. ಯೋಜನೆ ಅನುಷ್ಠಾನಕ್ಕೆ ಶ್ರಮಿಸಿದ ನಾಲ್ಕೂ ನಿಗಮಗಳ ನೌಕರರಿಗೆ ಧನ್ಯವಾದ ಅರ್ಪಿಸುತ್ತೇನೆ. ಜೂನ್ ತಿಂಗಳ ಶೇ. 80ರಷ್ಟು ಪ್ರಯಾಣದ ಹಣವನ್ನು ಸರಕಾರ ಭರಿಸಿದೆ. ಜುಲೈ ತಿಂಗಳ 293 ಕೋಟಿ ರೂ. ಬಿಡುಗಡೆಯಾಗಿದೆ. ಅಧಿಕಾರಿಗಳು ಡೇಟಾ ಕೊಟ್ಟ ಬಳಿಕ ಉಳಿದ ಹಣವನ್ನು ಸರಕಾರ ಬಿಡುಗಡೆ ಮಾಡಲಿದೆ ಎಂದು ಮಾಹಿತಿ ನೀಡಿದರು. ಬಿಎಂಟಿಸಿ, ಕೆಎಸ್‌ಆರ್‌ಟಿಸಿ ಹಾಗೂ ನಗರ ಸಾರಿಗೆಗಳಿಗೂ ಎಲೆಕ್ಟ್ರಿಕಲ್ ಬಸ್ ಖರೀದಿಗೆ ಪ್ರಸ್ತಾವನೆ ಕಳುಹಿಸಲಾಗಿದೆ ಎಂದರು.

# 13 ಸಾವಿರ ಚಾಲಕ, ನಿರ್ವಾಹಕರ ನೇಮಕ

ತುಮಕೂರು: ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿಯಿರುವ 13,000 ಚಾಲಕ, ನಿರ್ವಾಹಕರನ್ನು ನೇಮಕ ಮಾಡಲು ಸರಕಾರದಿಂದ ಅನುಮೋದನೆ ದೊರೆತಿದ್ದು, ಆರ್ಥಿಕ ಇಲಾಖೆ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗರೆಡ್ಡಿ ತಿಳಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕದ ಎಲ್ಲಾ ಬಸ್ಸುಗಳು ತುಮಕೂರು ನಗರದ ಮೂಲಕವಾಗಿಯೇ ಸಂಚರಿಸುವುದರಿಂದ ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗಿದೆ. ಸುಮಾರು 4.17 ಎಕರೆ ಪ್ರದೇಶದಲ್ಲಿ 111.46 ಕೋಟಿ ರು. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಬಸ್ ನಿಲ್ದಾಣ 2024ರ ಜನವರಿ ಮಾಹೆಯ ಅಂತ್ಯಕ್ಕೆ ಲೋಕಾರ್ಪಣೆಗೊಳ್ಳಲಿದೆ ಎಂದು ತಿಳಿಸಿದರು. ಕೇಂದ್ರ ಸರಕಾರದ ಆದೇಶದಂತೆ ರಾಜ್ಯದಲ್ಲಿ 15 ವರ್ಷ ಪೂರ್ಣಗೊಂಡ ಸರಕಾರಿ ವಾಹನ ಸೇರಿದಂತೆ ಎಲ್ಲಾ ವಾಹನಗಳನ್ನು ನೋಂದಣಿ ಮಾಡಲು ಅವಕಾಶವಿಲ್ಲ, ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಪ್ರಾದೇಶಿಕ ಸಾರಿಗೆ ಇಲಾಖೆಯ ಎಲ್ಲಾ ಸೇವೆಗಳನ್ನು ಆನ್‌ಲೈನ್ ಮೂಲಕ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

# 13 ಸಾವಿರ ಹುದ್ದೆಗಳಿಗೆ ಶೀಘ್ರವೇ ನೇಮಕಾತಿ



**ದಾವಣಗೆರೆ:** ರಾಜ್ಯ ಸಾರಿಗೆ ನಿಗಮಗಳಲ್ಲಿನ 13 ಸಾವಿರ ಹುದ್ದೆಗಳಿಗೆ ಶೀಘ್ರವೇ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಈ ಕುರಿತು ಮಂಡಳಿಯಲ್ಲಿ ತೀರ್ಮಾನಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕರೊನಾ ಸಂದರ್ಭದಲ್ಲಿ ನೇಮಕಾತಿ ಪ್ರಕ್ರಿಯೆ ನಿಷೇಧಿಸಲಾಗಿತ್ತು. ಈಗ ಮತ್ತೆ ಅದಕ್ಕೆ ಚಾಲನೆ ನೀಡಲಾಗಿದೆ ಎಂದು ಬುಧವಾರ ತಿಳಿಸಿದರು. 2016ರಲ್ಲಿ ನಾನು ಸಾರಿಗೆ ಸಚಿವರಿದ್ದಾಗ ನೇಮಕಾತಿ ಮಾಡಿದ್ದು ಬಿಟ್ಟರೆ ಕಳೆದ 7 ವರ್ಷಗಳಲ್ಲಿ ಒಂದೂ ಹುದ್ದೆ ಭರ್ತಿ ಮಾಡಿಲ್ಲ. 16 ಸಾವಿರ ಉದ್ಯೋಗಿಗಳು ನಿವೃತ್ತರಾಗಿದ್ದಾರೆ ಎಂದರು.

# 13,000 ಬಸ್ ಚಾಲಕ, ನಿರ್ವಾಹಕರ ನೇಮಕ: ರೆಡ್ಡಿ

ತುಮಕೂರು: ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿಯಿರುವ 13 ಸಾವಿರ ಚಾಲಕ, ನಿರ್ವಾಹಕರ ನೇಮಕಕ್ಕೆ ಸರ್ಕಾರದಿಂದ ಅನುಮೋದನೆ ದೊರೆತಿದ್ದು, ಆರ್ಥಿಕ ಇಲಾಖೆಗೆ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು. ಈ ಹಿಂದೆ 2016ರಲ್ಲಿ ನಾನು ಸಾರಿಗೆ ಸಚಿವನಾಗಿದ್ದಾಗ ಚಾಲಕ/ನಿರ್ವಾಹಕರನ್ನು ನೇಮಕಾತಿ ಮಾಡಲಾಗಿತ್ತು. ನಂತರ 7 ವರ್ಷಗಳಿಂದ ನೇಮಕಾತಿ ಪ್ರಕ್ರಿಯೆ ನಡೆದಿಲ್ಲ. ಹೀಗಾಗಿ ಹೊಸ ನೇಮಕಾತಿ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗಿದೆ. ಅಲ್ಲದೆ, 5000 ಹೊಸ ಬಸ್ಸುಗಳ ಖರೀದಿಗೆ ಮುಖ್ಯಮಂತ್ರಿಗಳು ₹500 ಕೋಟಿ ಅನುದಾನ ಒದಗಿಸಿದ್ದಾರೆ ಎಂದು ತಿಳಿಸಿದರು.